ಕರ್ನಾಟಕ ವಿಧಾನ ಸಭೆ, ಸಂಶೋಧನಾ ಮತ್ತು ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕೊರೋನಾ - ಕೋವಿಡ್-19

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ

ದಿನಾಂಕ : DATE : 20/6/2020

# ಕೊರೋನಾ: ದಿಲ್ಲಿ ಆರೋಗ್ಯ ಸಚಿವ ಜೈನ್ ಸ್ಥಿತಿ ಗಂಭೀರ

## ಖಾಸಗಿ ಆಸ್ಪತ್ರೆಗೆ ದಾಖಲು | ಪ್ಲಾಸ್ಮಾ ಥೆರಪಿ ಚಿಕಿತ್ಸೆ



ನವದೆಹಲಿ: ಕೊರೋನಾ ಸೋಂಕಿಗೆ ತುತ್ತಾಗಿರುವ ದೆಹಲಿ ಆರೋಗ್ಯ ಸಚಿವ ಸತ್ಯೇಂದ್ರ ಜೈನ್ ಆರೋಗ್ಯ ಸ್ಥಿತಿ ತೀರಾ ಗಂಭೀರವಾಗಿದ್ದು, ಖಾಸಗಿ ಆಸ್ಪತ್ರೆಗೆ ಸ್ಥಳಾಂತರಿಸಿ ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಜೈನ್ ಅವರು ನ್ಯುಮೋನಿಯಾದಿಂದಲೂ ಬಳಲುತ್ತಿದ್ದು, ಶ್ವಾಸಕೋಶದ ಸೋಂಕು ಉಲ್ಬಣಗೊಂಡ ಹಿನ್ನೆಲೆಯಲ್ಲಿ ನಿರಂತರವಾಗಿ ಕೃತಕ ಆಮ್ಲಜನಕ ನೀಡಲಾಗುತ್ತಿದೆ. ಜೊತೆಗೆ ಜೈನ್ ಅವರಿಗೆ ಪ್ಲಾಸ್ಮಾ ಥೆರಪಿ ನೀಡಲಾಗುವುದು ಎಂದು ವೈದ್ಯರು ತಿಳಿಸಿದ್ದಾರೆ.

## ತ.ನಾಡು ಸಚಿವಗೆ ಕೊರೋನಾ

ಚೆನ್ನೈ: ತಮಿಳುನಾಡಿನ ಹಾಲಿ ಉನ್ನತ ಶಿಕ್ಷಣ ಸಚಿವ ಅನ್ಬಳಗನ್ ಕೂಡ ಸೋಂಕಿಗೆ ತುತ್ತಾಗಿದ್ದಾರೆ. ಈ ಮೂಲಕ ಸೋಂಕಿಗೊಳಗಾದ ತ.ನಾಡಿನ ಮೊದಲ ಸಚಿವ ಮತ್ತು ಮೂರನೇ ರಾಜಕಾರಣಿ ಎನಿಸಿಕೊಂಡಿದ್ದಾರೆ. ಇತ್ತೀಚೆಗೆ ಡಿಎಂಕೆಯ ಅನ್ಬಳಗನ್ ನಿಧನರಾಗಿದ್ದರು.